ದೂರವಾಣಿ/ಫ್ಯಾಕ್ಸ್ : 2752 6208
ವೆಬ್‌ಸೈಟ್ : www.kanakapura-pa.in
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

ಮುನ್ಸಿಪಲ್ ಖಾತಾ ನಂ. 297 : 271, ರಂಗನಾಥಸ್ವಾಮಿ ದೇವಸ್ಥಾನ ರಸ್ತೆ, ಕೋಟೆ, ಕನಕಪುರ – 562 117

ಸಂಖ್ಯೆ:ಕಯೋಪ್ರಾ/ಪ್ರಾಪ್ರಪತ್ರ/42/2015-16 | 865        ದಿನಾಂಕ: 08 FEB 2016

## ಪ್ರಾರಂಭಿಕ ಪ್ರಮಾಣ ಪತ್ರ

ವಿಷಯ: ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಸ.ನಂ.151/2 ರಲ್ಲಿ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ : 1) ನಿಮ್ಮ ಮನವಿ ಪತ್ರ ದಿನಾಂಕ : 20.10.2015.
2) ಈ ಕಛೇರಿ ಪತ್ರ ಸಂಖ್ಯೆ:ಕಯೋಪ್ರಾ:ಎಲ್‌ಎ:04:2015-16/284 ದಿ:21.07.2015.
3) ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ದಿನಾಂಕ: 05.02.2016.

*******

ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಹೆಚ್.ಬಿ. ಶಿವಕುಮಾರ್ ಇವರು ಉಲ್ಲೇಖ(1) ರ ಪತ್ರದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಸ.ನಂ. 151/2 ರಲ್ಲಿ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಿರುತ್ತಾರೆ. ಪ್ರಸ್ತಾವಿತ ಜಮೀನಿಗೆ ಪ್ರಾಧಿಕಾರದಿಂದ ಈಗಾಗಲೇ ಉಲ್ಲೇಖ(2)ರ ಪತ್ರದಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ. ಅರ್ಜಿದಾರರು ಉಲ್ಲೇಖ(3)ರಲ್ಲಿ ಶುಲ್ಕಗಳನ್ನು ಪಾವತಿಸಿರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(1)ರನ್ವಯ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು ಶ್ರೀ ಹೆಚ್.ಬಿ. ಶಿವಕುಮಾರ್ ಇವರಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿದೆ.

### ಷರತ್ತುಗಳು

1. ಮೇಲ್ಕಂಡ ನಿವೇಶನದಲ್ಲಿ ಕಟ್ಟುವ ಕಟ್ಟಡಗಳನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು ಮತ್ತು ವಸತಿ ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ನಿರ್ಮಿಸತಕ್ಕದ್ದು.
2. ಪ್ರಸ್ತಾವಿತ ನಿವೇಶನದಲ್ಲಿ ಕಟ್ಟಡದ ಕೆಲಸ ಪೂರ್ಣಗೊಂಡ ನಂತರ ಈ ಪ್ರಾಧಿಕಾರದಿಂದ ಮುಕ್ತಾಯ ಪ್ರಮಾಣ ಪತ್ರ ಪಡೆಯತಕ್ಕದ್ದು.
3. ಕಟ್ಟಡದ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದಲ್ಲ.
4. ಕಟ್ಟಡದ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
5. ಈ ಪ್ರಾರಂಭಿಕ ಪ್ರಮಾಣ ಪತ್ರವು ಅನುಮೋದನೆ ದಿನಾಂಕದಿಂದ ಎರಡು ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ. ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
6. ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಕಟ್ಟಡ ನಿರ್ಮಾಣಕ್ಕೆ ಮುಂಚೆ ಮಾರ್ಪಾಡಿತ ಕಟ್ಟಡ ನಕ್ಷೆಗೆ ಅನುಮೋದನೆ ಪಡೆದು ಮುಂದುವರೆಸತಕ್ಕದ್ದು.
7. ಒಂದು ಅನುಮೋದಿತ ಅಪಾರ್ಟ್‌ಮೆಂಟ್ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.

....2

8. ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆಯಲ್ಲಿ ಶೇಖರಣೆ ಮಾಡಬಾರದು, ಈ ಬಗ್ಗೆ ಕಂಡು ಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.
9. ಕಟ್ಟಡ ಜಾಗ ಹೊರತುಪಡಿಸಿ ಉಳಿದ ಸೂಕ್ತ ಪ್ರದೇಶದಲ್ಲಿ ಹಾಲಿ ಇರುವ ಮರಗಳನ್ನು ಉಳಿಸಿಕೊಂಡು ಹೊಸದಾಗಿ ಮರ/ಗಿಡಗಳನ್ನು ಬೆಳೆಸತಕ್ಕದ್ದು.
10. ನಿವೇಶನದ ಆವರಣದೊಳಗೆ ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳತಕ್ಕದ್ದು.
11. ವಸತಿ ಬಡಾವಣೆಯಲ್ಲಿ ಕಟ್ಟಡಗಳ ನಿರ್ಮಾಣ ಸಂಬಂಧ ಸರ್ಕಾರದ ವಿವಿಧ ಇಲಾಖೆಗಳು ವಿಧಿಸುವ ಷರತ್ತು ಹಾಗೂ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
12. ಸೋಲಾರ್ ವಾಟರ್ ಹೀಟರ್‌ನ್ನು ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.
13. ಪ್ರಸ್ತಾವಿತ ನಿವೇಶನವು ಯಾವುದೇ ಭೂ ಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗಿ-ರುವುದಿಲ್ಲ.
14. ಈ ನಿವೇಶನದ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.
15. ಈ ಕಟ್ಟಡ ನಕ್ಷೆ ಮಂಜೂರಾತಿ ಪಡೆಯಲು ನೀವು ತಪ್ಪು ಮಾಹಿತಿ/ದಾಖಲೆಗಳನ್ನು ನೀಡಿರುವುದು ಕಂಡು ಬಂದರೆ ಈ ಮಂಜೂರಾತಿ ಆದೇಶವು ಸ್ವಯಂ ರದ್ದಾಗುತ್ತದೆಂದು ತಿಳಿಯತಕ್ಕದ್ದು.
16. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪತ್ರ ಸಂಖ್ಯೆ: PCB/234/CNP/15/H1187 Dated : 17.12.2015 ರಲ್ಲಿನ ಷರತ್ತುಗಳನ್ನು ತಪ್ಪದೇ ಪಾಲಿಸತಕ್ಕದ್ದು.
17. ಸರ್ಕಾರವು ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಸಂಸ್ಥೆಯವರೇ ಪಾವತಿಸತಕ್ಕದ್ದು.
18. ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಲಗತ್ತಿಸಿರುವ ಅನುಮೋದಿತ ಕಟ್ಟಡ ನಕ್ಷೆಗಳನ್ನು ಕಗ್ಗಲೀಪುರ ಗ್ರಾಮ ಪಂಚಾಯಿತಿಗೆ ಸಲ್ಲಿಸಿ, ಪಂಚಾಯಿತಿಯಿಂದ ಪರವಾನಗಿ ಪಡೆಯತಕ್ಕದ್ದು.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 15(4) ರಂತೆ ಕ್ರಮ ಕೈಗೊಳ್ಳಲಾಗುವುದು.

08.02.16

ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ ಕಾರ್ಯದರ್ಶಿ,
ಕನಕಪುರ ಯೋಜನಾ ಪ್ರಾಧಿಕಾರ
ಕನಕಪುರ.

ಇವರಿಗೆ,
ಶ್ರೀ ಹೆಚ್.ಬಿ. ಶಿವಕುಮಾರ್
ನಂ. 41/1, ಬುಲ್ ಟೆಂಪಲ್ ರಸ್ತೆ,
ಬಸವನಗುಡಿ,
ಬೆಂಗಳೂರು-560004